## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರೀಕ್ಷಾ ಪ್ರಾಧಿಕಾರ ಮಂಡಳಿಯು ನಡೆಸುವ ಡಿ.ಫಾರ್ಮ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನಕ್ಕೆ ಅವಕಾಶ ಕಲ್ಪಿಸುವ ಬಗ್ಗೆ.

ಓದಲಾಗಿದೆ: ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಔನಿಇ/131/ಸಿಬ್ಬಂದಿ/2009-10, ದಿನಾಂಕ: 15-12-2009, 17-04-2010, 25-09-2010, 10-01-2011 & 20-06-2011.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ, ಔಷಧ ನಿಯಂತ್ರಕರು ಪರೀಕ್ಷಾ ಪ್ರಾಧಿಕಾರ ಮಂಡಳಿ, ಅಧ್ಯಕ್ಷರು, ಬೆಂಗಳೂರು ಇವರು ತಿಳಿಸಿರುವಂತೆ, ಮರುಮೌಲ್ಯಮಾಪನ ಹೊರತುಪಡಿಸಿ ಮರುಎಣಿಕೆಯೂ ಸೇರಿದಂತೆ ಪರೀಕ್ಷಾ ಸಂಬಂಧಿತ ಇತರೆ ಎಲ್ಲಾ ಕೆಲಸ-ಕಾರ್ಯಗಳಿಗೆ ಶುಲ್ಕ ನಿಗದಿಪಡಿಸಿರುವುದರಿಂದ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮರುಮೌಲ್ಯಮಾಪನ ಪ್ರಕ್ರಿಯೆ ಅಗತ್ಯವಾಗಿರುವುದರಿಂದ, ವಿಷಯವೊಂದಕ್ಕೆ ₹ 1,000/- ಗಳ ಮರುಮೌಲ್ಯಮಾಪನ ಶುಲ್ಕ ವಿಧಿಸಲು ಅವಕಾಶ ಕಲ್ಪಿಸಿ ಸೂಕ್ತ ಆದೇಶ ಹೊರಡಿಸುವಂತೆ ಶಿಫಾರಸ್ಸು ಮಾಡಿದ್ದಾರೆ.

ಅಲ್ಲದೇ, ಪ್ರಸ್ತುತ ವಿವಿಧ ಕೋರ್ಸುಗಳ ಮರುಮೌಲ್ಯಮಾಪನಕ್ಕಾಗಿ ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ, ಬೆಂಗಳೂರು, ಕರ್ನಾಟಕ ರಾಜ್ಯ ಪದವಿಪೂರ್ವ ಶಿಕ್ಷಣ ಮಂಡಳಿ, ಬೆಂಗಳೂರು ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವು ವಿಧಿಸುತ್ತಿರುವ ಶುಲ್ಕವನ್ನು ಹೋಲಿಸಿದಲ್ಲಿ, ಪರೀಕ್ಷಾ ಪ್ರಾಧಿಕಾರ ಮಂಡಳಿಯು ಡಿ.ಫಾರ್ಮ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ವಿಷಯವೊಂದಕ್ಕೆ ₹ 1,000/- ದಂತೆ ಶುಲ್ಕವನ್ನು ನಿಗದಿ ಪಡಿಸಲು ಉದ್ದೇಶಿಸಿರುವ ಮೊತ್ತವು ವಿದ್ಯಾರ್ಥಿಗಳಿಗೆ ಹೆಚ್ಚಿನ ಹೊರೆ ಉಂಟು ಮಾಡದ ಕಾರಣ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸದರಿ ಪ್ರಸ್ತಾವನೆಯನ್ನು ಅನುಮೋದಿಸಿ ಸೂಕ್ತ ಆದೇಶ ಹೊರಡಿಸಬೇಕೆಂದು ಔಷಧ ನಿಯಂತ್ರಕರು ಪ್ರಸ್ತಾಪಿಸಿದ್ದಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 106 ಪಿಟಿಡಿ 2011**
**ಬೆಂಗಳೂರು, ದಿನಾಂಕ:20-08-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರೀಕ್ಷಾ ಪ್ರಾಧಿಕಾರ ಮಂಡಳಿಯು ನಡೆಸುವ ಡಿ.ಫಾರ್ಮ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿಷಯವೊಂದಕ್ಕೆ ₹ 1,000/- ದಂತೆ ಶುಲ್ಕವನ್ನು ನಿಗದಿಪಡಿಸಿ ಆದೇಶಿಸಿದೆ.

...2

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಆಕುಕ 332 ಆಂಆಸ 2011, ದಿನಾಂಕ:29-03-2011 ರಲ್ಲಿ ನೀಡಿದ ಸಹಮತಿಯನುಸಾರ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಎಸ್. ಇಟಗಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧಕರು), ಕರ್ನಾಟಕ, ಬೆಂಗಳೂರು-1.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಅಧ್ಯಕ್ಷರು, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, 3ನೇ ಮಹಡಿ, ನಂ.2, ಪಿ. ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು-27.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
5. ಸರ್ಕಾರದ ಉಪ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.